**ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ,**
**ಕೆ.ಆರ್ ನಗರ**

**ಸಿಸಿ ನಂ. 143/2025**

**ಪಿರ್ಯಾದುದಾರರುಃ** ಶ್ರೀ ಜಿತೇಂದ್ರ.ಕೆ.ಆರ್ ಬಿನ್ ಲೇಟ್ ರಾಜೇಗೌಡ,

**--ವಿರುದ್ಧ -**

**ಆರೋಪಿಃ** ಶ್ರೀಮತಿ ಪುಟ್ಟಲಕ್ಷ್ಮಮ್ಮ ಕೋಂ
ಲೇಟ್ ಡಿ.ಜವರಯ್ಯ,

**ಆಪಾದನೆ**

ಆರೋಪಿಯಾದ ನೀವು ಪಿರ್ಯಾದುದಾರರಿಗೆ ಕಾನೂನುಬದ್ಧವಾಗಿ ಪಾವತಿ ಮಾಡಬೇಕಾದ ರೂ.4,20,000/- ಮರುಪಾವತಿಗಾಗಿ **ಕೆನರಾ ಬ್ಯಾಂಕ್, ತಿಪ್ಪೂರು ಶಾಖೆ,** ಚೆಕ್ ನಂಃ 362277 ದಿನಾಂಕಃ 11.03.2025 ರೂ.4,20,000/- ಎಂದು ನಮೂದಿಸಿ ಚೆಕ್ಕನ್ನು ನೀಡಿದ್ದು, ಸದರಿ ಚೆಕ್ಕನ್ನು ಪಿರ್ಯಾದುದಾರರು ತಮ್ಮ ಖಾತೆಯನ್ನು ಹೊಂದಿರುವ **ಕೆನರಾ ಬ್ಯಾಂಕ್, ತಿಪ್ಪೂರು ಶಾಖೆ,** ಇಲ್ಲಿ ನಗದೀಕರಿಸಲು ಹಾಜರುಪಡಿಸಿದಾಗ, ಸದರಿಯವರು ನಿಮ್ಮ ಖಾತೆಯಲ್ಲಿ **"ಸಾಕಷ್ಟು ಹಣವಿಲ್ಲ"** ಎಂಬ ಹಿಂಬರಹಗಳೊಂದಿಗೆ ಚೆಕ್ಕು ಅಮಾನ್ಯಗೊಂಡಿದ್ದು, ಆ ಬಗ್ಗೆ ಸದರಿ ಬ್ಯಾಂಕಿನವರು ದಿನಾಂಕ: 12.03.2025 ರಂದು ಹಿಂಬರಹವನ್ನು ನೀಡಿದ್ದು, ನಂತರ ಫಿರ್ಯಾದಿದಾರರು ತಮ್ಮ ವಕೀಲರ ಮುಖಾಂತರ 15.03.2025 ಬರವಣಿಗೆ ರೂಪದಲ್ಲಿ ತಿಳುವಳಿಕೆ ಪತ್ರವನ್ನು ಕಳುಹಿಸಿದ್ದರೂ ಸಹ ಚೆಕ್ಕಿನಲ್ಲಿರುವ ಹಣವನ್ನು ಮರುಪಾವತಿ ಮಾಡಿರುವುದಿಲ್ಲ, ಆ ಕಾರಣ ನೀವು ವರ್ಗಾವಣೀಯ ಲಿಖಿತಗಳ ಅಧಿನಿಯಮ ಕಲಂ 138 ರಡಿಯಲ್ಲಿ ಶಿಕ್ಷಾರ್ಹವಾದ ಅಪರಾಧ ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿದ್ದೀರೆಂದು ಆಪಾದಿಸಲಾಗಿದೆ.

ಪ್ರಶ್ನೆಃ-1 ಈಗ ಓದಿ ಹೇಳಿದ ಆಪಾದನೆ ನಿಮಗೆ ತಿಳಿಯಿತೆ?
ಉತ್ತರಃ

ಪ್ರಶ್ನೆಃ-2 ಚೆಕ್ಕು ಸಂಖ್ಯೆ362277 ನಿಮ್ಮ ಬ್ಯಾಂಕಿನ ಖಾತೆಯ ಚೆಕ್ಕು ಆಗಿರುತ್ತದೇಯೇ
ಅಥವಾ ಇಲ್ಲವೇ ?
ಉತ್ತರಃ

ಪ್ರಶ್ನೆಃ-3 ಚೆಕ್ಕು ಸಂಖ್ಯೆ **362277** ರಲ್ಲಿ ಇರುವ ಸಹಿಯನ್ನು ಒಪ್ಪಿಕೊಳ್ಳುವೀರಾ ಅಥವಾ ಇಲ್ಲವೇ ?

ಉತ್ತರಃ

ಪ್ರಶ್ನೆ-4 ಚೆಕ್ಕು ಸಂಖ್ಯೆ**362277** ನೀವು ಪಿರ್ಯಾದಾರರಿಗೆ ನೀಡಿದ್ದೀರಾ ಅಥವಾ ಇಲ್ಲವೇ ?

ಉತ್ತರಃ

ಪ್ರಶ್ನೆ-5 ಸದರಿ ಚೆಕ್ಕನ್ನು ಸಾಲದ ಬಾಧ್ಯತೆಗಾಗಿ ದೂರುದಾರರಿಗೆ ನೀಡಲಾಗಿದೆ ಎಂಬುದನ್ನು ಒಪ್ಪಿಕೊಳ್ಳುವೀರಾ ಅಥವಾ ಇಲ್ಲವೇ ?

ಉತ್ತರಃ

## ಆರೋಪಿಯ ಪ್ರತಿರಕ್ಷಣೆಗಾಗಿ ಕೇಳಲಾದ ಪ್ರಶ್ನೆಗಳು

ಪ್ರಶ್ನೆ-ಎ ಚೆಕ್ಕನ್ನು ಭದ್ರತೆಗಾಗಿ ನೀಡಲಾಗಿದೇಯೇ ?

ಉತ್ತರಃ

ಪ್ರಶ್ನೆ-ಬಿ ಸಾಲವನ್ನು ಈಗಾಗಲೇ ಮರುಪಾವತಿ ಮಾಡಲಾಗಿದೆಯೇ ?

ಉತ್ತರಃ

ಪ್ರಶ್ನೆ-ಸಿ ಚೆಕ್ಕನ್ನು ದುರುಪಯೋಗ ಪಡೆಸಿಕೊಂಡಿದ್ದಾರೇಯೇ ?

ಉತ್ತರಃ

ಪ್ರಶ್ನೆ-6 ಪ್ರಕರಣವನ್ನು ಈ ಹಂತದಲ್ಲಿ ರಾಜಿ ಮಾಡಿಕೊಳ್ಳಲು ಒಪ್ಪಿಗೇ ಇದೇಯೇ ಅಥವಾ ಇಲ್ಲವೇ ?

ಉತ್ತರಃ

ಪ್ರಶ್ನೆ-7 ಮೇಲ್ಕಂಡ ಆಪಾದನೆಯನ್ನು ಒಪ್ಪಿಕೊಳ್ಳುವಿರೋ? ಅಥವಾ ವಿಚಾರಣೆ ಆಗಬೇಕೇ?

ಉತ್ತರಃ

(ದಿನಾಂಕ **12.12.2025** ರಂದು ತೆರೆದ ನ್ಯಾಯಾಲಯದಲ್ಲಿ ಆರೋಪಿಗೆ ತಿಳಿಯುವ ಭಾಷೆಯಲ್ಲಿ ಆರೋಪವನ್ನು ಓದಿ, ತಿಳಿಸಿ ಹೇಳಿ, ಕೇಳಿ ಉತ್ತರವನ್ನು ಪಡೆಯಲಾಗಿದೆ ಎಂದು ಈ ಮೂಲಕ ಧೃಡೀಕರಿಸಿದೆ)

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ. ಕೆ ಆರ್ ನಗರ.**